[صحيح] [رواه البخاري ومسلم]

ಮಾಡುತ್ತಾನೆ? ಅವನು ನತದೃಷ್ಟನೋ ಅಥವಾ ಅದೃಷ್ಟವಂತನೋ? ನಂತರ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆಣೆ ಮಾಡಿ ಹೇಳುವುದೇನೆಂದರೆ, ಒಬ್ಬ ವ್ಯಕ್ತಿ ಸ್ವರ್ಗವಾಸಿಗಳು ಮಾಡುವ ಕರ್ಮಗಳನ್ನು ಮಾಡುತ್ತಾನೆ. ಅಂದರೆ ಜನರ ದೃಷ್ಟಿಯಲ್ಲಿ ಅವನ ಕರ್ಮಗಳು ಉತ್ತಮವಾಗಿರುತ್ತವೆ. ಹೀಗೆ ಅವನ ಮತ್ತು ಸ್ವರ್ಗದ ಮಧ್ಯೆ ಒಂದು ಮೊಳ ಅಂತರವಿರುವ ತನಕ ಅವನು ಹೀಗೆಯೇ ಇರುತ್ತಾನೆ. ಅಂದರೆ, ಅವನು ಸ್ವರ್ಗವನ್ನು ಪ್ರವೇಶ ಮಾಡಲು ಒಂದು ಮೊಳದಷ್ಟು ದೂರ ಮಾತ್ರ ಬಾಕಿ ಇರುತ್ತದೆ. ಆಗ ಅವನ ವಿಧಿಯು ಅವನ ಮುಂಭಾಗಕ್ಕೆ ಬಂದು ಅವನು ನರಕವಾಸಿಗಳ ಕರ್ಮಗಳನ್ನು ಮಾಡುತ್ತಾನೆ. ಹೀಗೆ ಅವನ ಕೊನೆಯ ಕರ್ಮವು ನರಕವಾಸಿಗಳ ಕರ್ಮವಾಗಿದ್ದು ಅವನು ನರಕವನ್ನು ಪ್ರವೇಶಿಸುತ್ತಾನೆ. ಏಕೆಂದರೆ ನಿರಂತರ ಸತ್ಕರ್ಮ ಮಾಡುವುದು ಮತ್ತು ನಿಲುವಿನಲ್ಲಿ ಬದಲಾವಣೆ ಮಾಡದಿರುವುದು ಕರ್ಮಗಳ ಸ್ವೀಕಾರಕ್ಕೆ ಷರತ್ತಾಗಿದೆ. ಇನ್ನೊಬ್ಬ ವ್ಯಕ್ತಿ ನರಕವಾಸಿಗಳ ಕರ್ಮಗಳನ್ನು ಮಾಡುತ್ತಾ ಇರುತ್ತಾನೆ. ಹೀಗೆ ಅವನು ನರಕವನ್ನು ಸಮೀಪಿಸುವಷ್ಟರಲ್ಲಿ, ಅಂದರೆ ಅವನ ಮತ್ತು ನರಕದ ನಡುವೆ ಒಂದು ಮೊಳ ಮಾತ್ರ ದೂರವಿರುವಾಗ, ಅವನ ವಿಧಿಯು ಅವನ ಮುಂಭಾಗಕ್ಕೆ ಬಂದು ಅವನು ಸ್ವರ್ಗವಾಸಿಗಳ ಕರ್ಮಗಳನ್ನು ಮಾಡುತ್ತಾನೆ. ಹೀಗೆ ಅವನ ಕೊನೆಯ ಕರ್ಮವು ಸ್ವರ್ಗವಾಸಿಗಳ ಕರ್ಮವಾಗಿದ್ದು ಅವನು ಸ್ವರ್ಗವನ್ನು ಪ್ರವೇಶಿಸುತ್ತಾನೆ.

https://sunnah.global/hadeeth/kn/show/66513